# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1037(1163)
ಸದಸ್ಯರ ಹೆಸರು : ಶ್ರೀಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 23-12-2021
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ವಿಷಯ | ಉತ್ತರ |
|---|---|---|
| ಅ) | ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಮೆಟ್ರೋ ಕಾಮಗಾರಿಗಳು ತೀರಾ ಮಂದಗತಿಯಲ್ಲಿ ಸಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ಮೆಟ್ರೋ ರೈಲು ಯೋಜನೆ ಹಂತ-2 ಹಾಗೂ 2ಎ & 2ಬಿ ಪ್ರಗತಿಯಲ್ಲಿದೆ. ಪ್ರಾರಂಭದಲ್ಲಿ ಮೆಟ್ರೋ ರೈಲು ಯೋಜನೆ ಹಂತ-2ಕ್ಕೆ ಭೂಸ್ವಾಧೀನ ಪ್ರಕ್ರಿಯೆ ಹಾಗೂ ಮರಗಳನ್ನು ತೆರವುಗೊಳಿಸುವ ಸಲುವಾಗಿ ಹಾಗೂ ಕೋವಿಡ್-19 ಸಾಂಕ್ರಾಮಿಕ ರೋಗದ ಕಾರಣ ಕಾಮಗಾರಿಗಳು ಮಂದಗತಿಯಲ್ಲಿ ಸಾಗಿದ್ದವು. ಪ್ರಸ್ತುತ ಹಂತ-2ರಲ್ಲಿ 75.06 ಕಿ.ಮೀ.ಗಳ ಉದ್ದದ ಪೈಕಿ ಈಗಾಗಲೇ 13.65 ಕಿ.ಮೀ ಮಾರ್ಗವನ್ನು ಸಾರ್ವಜನಿಕ ಸೇವೆಗೆ ಅನುವು ಮಾಡಿ ಕೊಡಲಾಗಿರುತ್ತದೆ. 2022ರ ವೇಳೆಗೆ 32.6 ಕಿ.ಮೀ.ಗಳನ್ನು ಮುಕ್ತಾಯಗೊಳಿಸಲು ಯೋಜಿಸ ಲಾಗಿದ್ದು, ಬಾಕಿ ಉಳಿದ 25.81 ಕಿ.ಮೀ.ಗಳನ್ನು ಮಾರ್ಚ್-2025ರ ವೇಳೆಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. |
| ಆ) | ಹಾಗಿದ್ದಲ್ಲಿ, ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೆಟ್ರೋ ಕಾಮಗಾರಿಗಳು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಬೆಂಗಳೂರು ಮೆಟ್ರೋ ರೈಲು ಯೋಜನೆಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಮಾನ್ಯ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಪ್ರಗತಿಯ ಪರಿಶೀಲನೆಯನ್ನು ಮಾಡಲಾಗುತ್ತಿದ್ದು, ಅಂತರ್ ಇಲಾಖೆಗಳ ಸಮಸ್ಯೆಗಳನ್ನು ಬಗೆಹರಿಸಲಾಗಿದೆ. ನಿಗಮದ ಹಿರಿಯ ಅಧಿಕಾರಿಗಳು ಮೇಲಿಂದ ಮೇಲೆ ಪ್ರಗತಿಯನ್ನು ಪರಿಶೀಲಿಸಿ, ಕಾಮಗಾರಿಗಳನ್ನು ಸಕಾಲಕ್ಕೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ. |
| ಇ) | ಬೆಂಗಳೂರಿನ ನಾಗಸಂದ್ರ-ಬಿಐಇಸಿ (ಬೆಂಗಳೂರು ಅಂತರ ರಾಷ್ಟ್ರೀಯ ಎಕ್ಸಿಬಿಷನ್ ಸೆಂಟರ್) ನಡುವಿನ ನಮ್ಮ ಮೆಟ್ರೋ ಕಾಮಗಾರಿ ತೀರಾ ವಿಳಂಬವಾಗುತ್ತಿರಲು ಕಾರಣಗಳೇನು; ಇದನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಮೆಟ್ರೋ ಸೇವೆಯನ್ನು ಒದಗಿಸಲಾಗುವುದು; | ಬೆಂಗಳೂರು ಮೆಟ್ರೋ ರೈಲು ಯೋಜನೆ ರೀಚ್-3ರ ವಿಸ್ತರಣೆ ನಾಗಸಂದ್ರದಿಂದ ಬೆಂಗಳೂರು ಅಂತರರಾಷ್ಟ್ರೀಯ ಎಕ್ಸಿಬಿಷನ್ ಸೆಂಟರ್‌ವರೆಗಿನ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.<br><br>ಪ್ರಾರಂಭದಲ್ಲಿ ಕಾಮಗಾರಿಯು ವಿಳಂಬವಾಗಿರುವುದಕ್ಕೆ ನೈಸ್ ರಸ್ತೆಯ ವರು ಮೆಟ್ರೋ ಕಾಮಗಾರಿಗೆ ಬೇಕಾದ ಭೂಸ್ವಾಧೀನ ನೀಡುವುದಕ್ಕೆ ಅಡ್ಡಿಪಡಿಸಿರುತ್ತಾರೆ ಹಾಗೂ ಅಂಚೆಪಾಳ್ಯದ ಗ್ರಾಮಸ್ಥರು ಮೆಟ್ರೋ ನಿಲ್ದಾಣ ಬೇಕೆಂಬ ಬೇಡಿಕೆಯಿಂದಾಗಿ ನಿರ್ಮಾಣಕ್ಕೆ ಅಡಚಣೆ ಒಡ್ಡಿದ್ದರಿಂದಲೂ ವಿಳಂಬವಾಗಿರುತ್ತದೆ.<br><br>ಸದರಿ ಕಾಮಗಾರಿಯನ್ನು ಡಿಸೆಂಬರ್-2022ರ ವೇಳೆಗೆ ಪೂರ್ಣಗೊಳಿಸಲಾಗುವುದು. |

| | | |
|---|---|---|
| ಈ) | ಸದರಿ ಮೆಟ್ರೋ ಸೇವೆಯು ನೆಲಮಂಗಲದವರೆಗೆ ವಿಸ್ತರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಇದು ಯಾವಗ ಸಾಕಾರಗೊಳ್ಳುವುದು ? | ಬೆಂಗಳೂರು ಮೆಟ್ರೋ ರೈಲು ಯೋಜನೆ ರೀಚ್-3ನ್ನು ನೆಲಮಂಗಲದವರೆಗೆ ವಿಸ್ತರಿಸುವ ಪ್ರಸ್ತಾವನೆಯು ಸಿಎಂಪಿ (CMP) 2031ರ ಯೋಜನೆಯಲ್ಲಿ ಒಳಗೊಂಡಿರದ ಕಾರಣ ಪ್ರಸ್ತುತ ನೆಲಮಂಗಲಕ್ಕೆ ಮೆಟ್ರೋ ವಿಸ್ತರಣೆ ಯೋಜನೆಯು ಇರುವುದಿಲ್ಲ. |

ಕಡತ ಸಂಖ್ಯೆ ನಅಇ 248 ಪಿ.ಆರ್.ಜೆ. 2021

(ಬಸವರಾಜ ಬೊಮ್ಮಾಯಿ)
ಮುಖ್ಯ ಮಂತ್ರಿಗಳು